ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಲು ಇರಬೇಕಾದ ಸೌಕರ್ಯಗಳ ಕುರಿತು

ಶ್ರೀ ರವಿಕುಮಾರ್. ಎನ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

106 (04) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಐ.ಟಿ ಮತ್ತು ಬಿ.ಟಿ, ವಿಜ್ಞಾನ ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಇರಬೇಕಾದ ಕನಿಷ್ಟ ಮೂಲಸೌಕರ್ಯಗಳೇನು; ಕಾಲೇಜನ್ನು ಪ್ರಾರಂಭಿಸಲು ಇರಬೇಕಾದ ಜಾಗದ ಬಗ್ಗೆ ಇರುವ ನಿಯಮಗಳೇನು;

(ಆ) ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೆ ನಂ. 63ರಲ್ಲಿ ಒತ್ತುವರಿ ಮಾಡಿಕೊಂಡಿರುವ 5 ಎಕರೆ ಸ್ಥಳದಲ್ಲಿ ತಾಂತ್ರಿಕ ಶಿಕ್ಷಣ ಸಂಸ್ಥೆಯನ್ನು ತೆರೆಯಲು ಅನುಮತಿ ನೀಡಿದವರ್ಯಾರು;

(ಇ) ಇಸ್ಲಾಮಿಯಾ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜನ್ನು ಆರಂಭಿಸಲು ಸಲ್ಲಿಸಿರುವ ದಾಖಲೆಗಳಲ್ಲಿ ಈ ಕಾಲೇಜು ಹೊಂದಿರುವ ಅಥವಾ ಬಳಸಿಕೊಳ್ಳುತ್ತಿರುವ ಜಾಗ ಎಷ್ಟು; ಈ ಜಾಗದ ಮಾಹಿತಿಯನ್ನು ಪರಿಶೀಲಿಸಿ ದೃಢೀಕರಿಸಿದ ಅಧಿಕಾರಿ ಯಾರು; (ವಿವರ ನೀಡುವುದು)

(ಈ) ಇಸ್ಲಾಮಿಯಾ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜನ್ನು ಆರಂಭಿಸಲು ಶಿಫಾರಸ್ಸು ಮಾಡಿರುವ ಅಧಿಕಾರಿ ಯಾರು; ಯಾವ ನಿಯಮಗಳನ್ವಯ ಒತ್ತುವರಿ ಮಾಡಿದ ಜಾಗದಲ್ಲಿ ಕಾಲೇಜನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ;

(ಉ) ಸುಳ್ಳು ದಾಖಲೆ ಹಾಗೂ ತಪ್ಪು ಮಾಹಿತಿ ನೀಡಿ ಪ್ರಾರಂಭಿಸಲಾದ ಕಾಲೇಜಿನ ಅನುಮತಿ ಹಿಂಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?